# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ.ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1016 (1197)
ಉತ್ತರಿಸಬೇಕಾದ ದಿನಾಂಕ : 13.03.2026

| ಕ್ರ. ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದ ಬಹುತೇಕ ಹಳ್ಳಿಗಳು ಶುದ್ಧ ಕುಡಿಯುವ ನೀರಿನ ಪೂರೈಕೆಯಿಂದ ವಂಚಿತವಾಗಿರುವುದು ಹಾಗೂ ಈಗಾಗಲೇ ಕೆಲವು ಗ್ರಾಮಗಳಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ದುಸ್ಥಿತಿಯಲ್ಲಿದ್ದು, ಸಮರ್ಪಕವಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಕಲ್ಯಾಣ ಕರ್ನಾಟಕ ಭಾಗದಲ್ಲಿನ ಒಟ್ಟು 7 ಜಿಲ್ಲೆಗಳಲ್ಲಿ ಈಗಾಗಲೇ ಜೆಜೆಎಂ ಯೋಜನೆಯಡಿಯಲ್ಲಿ ಒಟ್ಟು 35 ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳು ಪ್ರಗತಿಯಲ್ಲಿದ್ದು, 7 ಜಿಲ್ಲೆಯ ಗ್ರಾಮೀಣ ಪ್ರದೇಶದ ಗ್ರಾಮಸ್ಥರಿಗೆ ಈ ಯೋಜನೆಗಳು ಪೂರ್ಣಗೊಂಡ ನಂತರ ಕುಡಿಯುವ ನೀರನ್ನು ಒದಗಿಸಲು ಯೋಜಿಸಲಾಗಿದೆ. ಸದರಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಡಿಸೆಂಬರ್-2026 ಅಂತ್ಯದೊಳಗೆ ಪೂರ್ಣಗೊಳಿಸಿ ನೀರು ಸರಬರಾಜು ಮಾಡುವ ಗುರಿ ಹೊಂದಲಾಗಿದೆ.<br>ಕೆಲವು ಗ್ರಾಮಗಳಲ್ಲಿರುವ ಕೆಲವು ಶುದ್ಧ ಕುಡಿಯುವ ನೀರಿನ ಘಟಕಗಳು ದುಸ್ಥಿತಿಯಲ್ಲಿದ್ದು, ಸಮರ್ಪಕವಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಮುಂಬರುವ ಬೇಸಿಗೆಯಲ್ಲಿ ಬಿಸಿಲಿನ ತಾಪವೂ ಹೆಚ್ಚಾಗುವ ಸಂಭವ ಇದ್ದು ಬೇಸಿಗೆಯು ಸಂಬವಿಸುವ ಮುಂಚಿತವಾಗಿ ಈ ಭಾಗದ ಪ್ರತಿ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಸ್ಥಾಪಿಸಲು ಸರ್ಕಾರವು ಚಿಂತಿಸುವುದೇ. | ಮುಂಬರುವ ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಗಾಗಿ ಈ ಭಾಗದ ಅವಶ್ಯವಿರುವ ಗ್ರಾಮಗಳಿಗೆ ಟ್ಯಾಂಕರ್, ಬೋರ್ ವೆಲ್ ಹಾಗೂ ಖಾಸಗಿ ಬೋರ್ ವೆಲ್‌ಗಳನ್ನು ಬಾಡಿಗೆ ಪಡೆಯುವ ಮುಖಾಂತರ ಕುಡಿಯುವ ನೀರನ್ನು ಒದಗಿಸಲು ಹಾಗೂ ಬೋರ್‌ವೆಲ್‌ನ ಇಳುವರಿಯನ್ನು ಹೆಚ್ಚಿಸಲು Flushing/Deepening ಮಾಡಲು ಸಹ ಕ್ರಮ ಕೈಗೊಳ್ಳಲಾಗುತ್ತಿದೆ.<br>ಮಾಲಿನ್ಯದಿಂದ ಜಲಮೂಲ ಕಲುಷಿತಗೊಂಡ ಗ್ರಾಮಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಹೊಸ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಯೋಜಿಸಲಾಗಿದೆ.<br>ಈಗಾಗಲೇ Non SDP ಯೋಜನೆಯಡಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ದುರಸ್ಥಿಗೆ ಕಲ್ಯಾಣ ಕರ್ನಾಟಕ ಭಾಗದಲ್ಲಿನ ಒಟ್ಟು 1017 ಘಟಕಗಳಿಗೆ ರೂ.508.50 ಲಕ್ಷಗಳ ಹಾಗೂ SDP ಯೋಜನೆಯಡಿಯಲ್ಲಿ ಒಟ್ಟು 93 ಘಟಕಗಳಿಗೆ ರೂ. 56.50 ಲಕ್ಷಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದ್ದು, ದುರಸ್ಥಿ ಕಾರ್ಯ ಕೈಗೊಳ್ಳಬೇಕಿದೆ. |
| ಇ) | ಇಡೀ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬರುವ ಎಲ್ಲಾ ಜಿಲ್ಲೆಗಳ ಗ್ರಾಮಗಳಿಗೂ ಶುದ್ಧ ಕುಡಿಯುವ ನೀರನ್ನು ಪೂರೈಸುವ ಸಂಬಂಧ ಇಲಾಖೆಯು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ವಿಶೇಷ ಪ್ಯಾಕೇಜ್ ಅನ್ನು ಜಾರಿಗೊಳಿಸುವ ಸಂಬಂಧ ಸರ್ಕಾರದ ನಿಲುವೇನು: | |
| ಈ) | ಯಾವ ಕಾಲಮಿತಿಯೊಳಗೆ ಈ ಶುದ್ಧ ಕುಡಿಯುವ ನೀರಿನ ಸಮಸ್ಯೆಯನ್ನು ಸರ್ಕಾರದಿಂದ ಪರಿಹರಿಸಲಾಗುವುದು? | ಈಗಾಗಲೇ ಜೆಜೆಎಂ ಯೋಜನೆಯಡಿ ಪ್ರಸ್ತಾಪಿಸಿ ಪ್ರಗತಿಯಲ್ಲಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಡಿಸೆಂಬರ್-2026ರ ಅಂತ್ಯದೊಳಗೆ ಪೂರ್ಣಗೊಳಿಸಿ ನೀರು ಸರಬರಾಜು ಮಾಡುವ ಗುರಿ ಹೊಂದಲಾಗಿದೆ. |

ಸಂಖ್ಯೆ:ಗ್ರಾಕುನೀ&ನೈಇ/ಮುಇಂ/ತಾಂ/136/2025-26

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ ಸಚಿವರು.